# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪಿ.ಹೆಚ್. ಪೂಜಾರ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ

****

**ವಿಷಯ:**

ದಿನಾಂಕ:12.03.2025ರಂದು ಕನ್ನಡ ದಿನಪತ್ರಿಕೆಯೊಂದರಲ್ಲಿ ಪ್ರಕಟಣೆಗೊಂಡಿರುವ "ಆಲಮಟ್ಟಿ ಡ್ಯಾಂ ಎತ್ತರ ಹೆಚ್ಚಳ ವಿರೋಧಿಸಿ ಮಹಾರಾಷ್ಟ್ರ ಕ್ಯಾತೆ" ಎಂಬ ವಿಶೇಷ ಶೀರ್ಷಿಕೆಯಡಿ ವರದಿಯಾಗಿರುವುದನ್ನು ಶೂನ್ಯ ವೇಳೆಯಲ್ಲಿ ವಿಷಯ ಪ್ರಸ್ತಾಪಿಸಲು ಅವಕಾಶ ನೀಡಬೇಕೆಂದು ಕೋರುತ್ತೇನೆ.

2008 ರಲ್ಲಿ ಕೃಷ್ಣಾ ಜಲ ವಿವಾದ ನ್ಯಾಯಾಧಿಕರಣ ಹೊರಡಿಸಿದ ತೀರ್ಪಿನಲ್ಲಿ ಜಲಾಶಯದ ಎತ್ತರವನ್ನು 524.256 ಮೀ. ಎತ್ತರಿಸಲು ಅನುಮತಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಆಲಮಟ್ಟಿ ಜಲಾಶಯವನ್ನು ಎತ್ತರಿಸುವ ಕರ್ನಾಟಕದ ಯೋಜನೆಯ ವಿರುದ್ಧ ಸುಪ್ರೀಂ ಕೋರ್ಟ್ ನ ಮಧ್ಯಪ್ರವೇಶಕ್ಕೆ ಅಗ್ರಹಿಸಬೇಕೆಂದಿರುವ ಮಹಾರಾಷ್ಟ್ರ ರಾಜ್ಯ ಸರ್ಕಾರವು ಮೇಲಿಂದ ಮೇಲೆ ಗಡಿ ತಂಟೆ ತೆಗೆಯುವುದರ ಜೊತೆಗೆ ಆಲಮಟ್ಟಿ ಅಣೆಕಟ್ಟೆ ಎತ್ತರಿಸುವ ವಿಷಯದಲ್ಲಿಯೂ ಕೂಡ ಕ್ಯಾತೆ ಆರಂಭಿಸಿರುವುದು ಕರ್ನಾಟಕದ ಜನತೆಗೆ ಆತಂಕಕ್ಕೆ ಕಾರಣವಾಗಿದೆ.

ಮಹಾರಾಷ್ಟ್ರದ ವಿಧಾನ ಪರಿಷತ್ತಿನಲ್ಲಿ ಜಲಾಶಯ ಎತ್ತರದ ಕರ್ನಾಟಕದ ಯೋಜನೆಗೆ ಮಹಾರಾಷ್ಟ್ರ ವಿರೋಧ ವ್ಯಕ್ತಪಡಿಸಿದೆಯೇ ಎಂಬ ಎನ್.ಸಿ.ಪಿ. ನಾಯಕ ಅರುಣ ಲಾಡ್ ಅವರು ಪ್ರಶ್ನಿಸಿದರು. ಅದಕ್ಕೆ ಮಹಾರಾಷ್ಟ್ರ ರಾಜ್ಯ ಸರ್ಕಾರದ ಜಲಸಂಪನ್ಮೂಲ ಸಚಿವರಾದ ರಾಧಾಕೃಷ್ಣಾ ವಿ.ಖೆ.ಪಾಟೀಲ್ ಅವರು ಕರ್ನಾಟಕ ಯೋಜನೆಯನ್ನು ಮಹಾರಾಷ್ಟ್ರ ರಾಜ್ಯ ಸರ್ಕಾರ ನಿರಂತರವಾಗಿ ವಿರೋಧಿಸುತ್ತಲೇ ಬಂದಿದೆ ಎಂದು ಉತ್ತರಿಸಿದ್ದು ಯಾವ ಆಧಾರದ ಮೇಲೆ ಎನ್ನುವುದು ನಮ್ಮ ರಾಜ್ಯದ ರೈತರ ಚಿಂತೆಗೆ ಕಾರಣವಾಗಿದೆ.

ಡ್ಯಾಂ ಎತ್ತರಿಸುವಿಕೆಗೆ ಅನುಮತಿಸುವ ಮೊದಲು ಮಹಾರಾಷ್ಟ್ರ ಸರ್ಕಾರ ಸುಪ್ರೀಂ ಕೋರ್ಟ್ ನಲ್ಲಿ ಶೀಘ್ರವೇ ಮಧ್ಯಂತರ ಅರ್ಜಿ ಸಲ್ಲಿಸುತ್ತೇವೆ ಎಂಬ ಹೇಳಿಕೆ ಕನ್ನಡಿಗರ ಕಂಗೆಣ್ಣಿಗೆ ಗುರಿಯಾಗಿದೆ.

ಡ್ಯಾಂ ಎತ್ತರದಿಂದ ಕೊಲ್ಲಾಪುರ, ಸಾಂಗ್ಲಿಗೆ ಪ್ರವಾಹ ಆತಂಕ ಇದೆ ಎಂಬ ಮಹಾರಾಷ್ಟ್ರ ಅವಾಸ್ತವಿಕ ಕಲ್ಪನೆ ಮೂರ್ಖತನದ್ದಾಗಿದೆ. ಕರ್ನಾಟಕ ಉಳಿದಿರುವ ಡ್ಯಾಂ ಎತ್ತರ 519.02 ಮೀ. ದಿಂದ 524.256 ಎತ್ತರದವರೆಗೆ ಮಾಡುವುದರಿಂದ 130 ಟಿಎಂಸಿ ಹೆಚ್ಚುವರಿ ನೀರಿನಿಂದ 9 ಉಪಯೋಜನೆಗಳ ನೆರವಿನೊಂದಿಗೆ ಸುಮಾರು 6 ಲಕ್ಷ ಹೆಕ್ಟೇರ್ ದಷ್ಟು ಪ್ರದೇಶ ನೀರಾವರಿ ಮಾಡಿಕೊಳ್ಳಬೇಕು ಎನ್ನುವ ಒತ್ತಡದಲ್ಲಿ ಕರ್ನಾಟಕ ಇರುವಾಗಲೇ ಇಂತಹ ನೈಜವಲ್ಲದ ಚಿಲ್ಲರೆ ತಕರಾರುಗಳನ್ನು ಎತ್ತುವ ಮೂಲಕ ನಮ್ಮ ನೀರಿನ ಹಕ್ಕನ್ನು ಕಸಿಯುವ ಪ್ರಯತ್ನದಲ್ಲಿದ್ದು, ಸರ್ಕಾರ ಗಂಭೀರವಾಗಿ ಈ ವಿಷಯವನ್ನು ಪರಿಗಣಿಸಿ, ಸೂಕ್ತ ವೇದಿಕೆಯಲ್ಲಿ ತಕ್ಷಣದ ಕ್ರಮ ಕೈಗೊಳ್ಳುವ ಕುರಿತು.

*********

ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ತೀರ್ಪಿನಲ್ಲಿ ರಾಜ್ಯಕ್ಕೆ ಹಂಚಿಕೆಯಾದ ಒಟ್ಟಾರೆ 173 ಟಿ.ಎಂ.ಸಿ. (ನದಿ ಪಾತ್ರದಡಿ ನೈಸರ್ಗಿಕ ಹರಿವು 7 ಟಿ.ಎಂ.ಸಿ. ಒಳಗೊಂಡು) ಪೈಕಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಯೋಜನೆಗೆ 130 ಟಿ.ಎಂ.ಸಿ ಹಂಚಿಕೆಯಾಗಿರುತ್ತದೆ. ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2 ಅಂತಿಮ ತೀರ್ಪು ಕೇಂದ್ರ ಸರ್ಕಾರದಿಂದ ಗೆಜೆಟ್ ಪ್ರಕಟಣೆ ಆಗಬೇಕಾಗಿರುತ್ತದೆ. ಕೃಷ್ಣಾ ಮೇಲ್ದಂಡೆ ಯೋಜನೆ ಹಂತ -

3ರ ಯೋಜನೆಗೆ ಹಂಚಿಕೆಯಾದ 130 ಟಿ.ಎಂ.ಸಿ. ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆಯನ್ನು RL 519.60 Mt. ದಿಂದ RL 524.256 Mt. ವರೆಗೆ ಎತ್ತರಿಸುವುದನ್ನು ಒಳಗೊಂಡಿರುತ್ತದೆ.

ಕೃಷ್ಣಾ ಮೇಲ್ದಂಡೆ ಹಂತ-3ರಡಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆಯನ್ನಯ RL 519.60 Mt. ದಿಂದ RL 524.256 Mt. ವರೆಗೆ ಎತ್ತರಿಸುವ ಕುರಿತಂತೆ ಈಗಾಗಲೇ ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ವರದಿ (2010ರಲ್ಲಿ)ಯಲ್ಲಿ "Height of Almatti Dam – Issue No.14 ರಲ್ಲಿ ಈ ಕೆಳಗಿನಂತೆ ನಮೂದಿಸಲಾಗಿರುತ್ತದೆ.

"Whether Karnataka is entitled to storage of water up to the level of 524.256 m in the Almatti Dam or the height of the Almatti Dam be restricted at 515 m as claimed by Andhra Pradesh or 512 m as claimed by Maharashtra?"

ಮೇಲ್ಕಂಡ Issue No.14ಗೆ ಸಂಬಂಧಪಟ್ಟಂತೆ, ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2ರ ವರದಿಯಲ್ಲಿ ಅಂತಿಮವಾಗಿ ಈ ಕೆಳಕಂಡಂತೆ ತೀರ್ಪು ದಾಖಲಿಸಿರುತ್ತದೆ.

"In view of the discussion held above, we decide the issue in affirmative to the extent that State of Karnataka is entitled to storage of water up to the level of 524.256 m in Almatti Reservoir and in negative to the extent that height of Almatti Dam may be restricted at 515 m as claimed by Andhra Pradesh or 512 m as claimed by Maharashtra."

ಮುಂದುವರೆದು, ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2ರ ಅಂತಿಮ ವರದಿ (2010 Vol-IV) ಯಲ್ಲಿ Submergence in Maharashtra ಕುರಿತಂತೆ Issue No.10 ರಲ್ಲಿ ಈ ಕೆಳಕಂಡಂತೆ ನಮೂದಿಸಲಾಗಿರುತ್ತದೆ.

"Whether, it is lawful for the State of Karnataka to construct dams or barrages or weirs which may or likely to submerge the territories of Maharashtra without its consent?"

ಮೇಲ್ಕಂಡ Issue No.10ಗೆ ಸಂಬಂಧಪಟ್ಟಂತೆ, ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2ರ ವರದಿಯಲ್ಲಿ ಅಂತಿಮವಾಗಿ ಈ ಕೆಳಕಂಡಂತೆ ತೀರ್ಪು ದಾಖಲಿಸಿರುತ್ತದೆ.

"......... After considering the facts and circumstances, it has been held that the State of Karnataka could go ahead with FRL 524.256 m at Almatti Dam. It has been held that no submergence was likely to take place in the State of Maharashtra on the basis of the report of the hydrographic survey conducted about actual sedimentation in Hipparagi Barrage and Almatti Dam."

ಮೇಲ್ಕಂಡ ಇತ್ಯರ್ಥಗೊಂಡ ವಿಷಯದ ಕುರಿತಂತೆ ಮಹರಾಷ್ಟ್ರ ರಾಜ್ಯವು ಸುಪ್ರೀಂ ಕೋರ್ಟ್ ನಲ್ಲಿ ಮಧ್ಯಂತರ ಅರ್ಜಿ ಸಲ್ಲಿಸಿದ ಪಕ್ಷದಲ್ಲಿ, ರಾಜ್ಯ ಸರ್ಕಾರವು ಶೀಘ್ರದಲ್ಲಿಯೇ ಎಲ್ಲಾ ಕಾನೂನಾತ್ಮಕ ಕ್ರಮಗಳನ್ನು ಜರುಗಿಸಲು ಸಿದ್ಧವಿರುತ್ತದೆ.

ದಿನಾಂಕ:16.09.2011ರ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪನ್ನು ಗೆಜೆಟ್ ಪ್ರಕಟಣೆ ಮಾಡದಂತೆ ಕೇಂದ್ರ ಸರ್ಕಾರಕ್ಕೆ ಆದೇಶಿಸಲಾಗಿದ್ದು, ಸದರಿ ತೀರ್ಪನ್ನು ಮಾರ್ಪಡಿಸುವಂತೆ ಕೋರಿ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಮಧ್ಯಕಾಲೀನ ಅರ್ಜಿಗಳನ್ನು ಸಲ್ಲಿಸಿದೆ.

ಕೃಷ್ಣಾ ನ್ಯಾಯಾಧೀಕರಣದ ಅಂತಿಮ ತೀರ್ಪಿನ್ನು ಗೆಜೆಟ್ ಅಧಿಸೂಚನೆ ಹೊರಡಿಸುವ ಬಗ್ಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಮಾರ್ಪಡಿಸಲು ಸೂಕ್ತ ಅಫಿಡವಿಟ್ ಸಲ್ಲಿಸಿ ನಂತರ ನ್ಯಾಯಾಧೀಕರಣದ ಆದೇಶವನ್ನು ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ನಿರಂತರವಾಗಿ ಕೇಂದ್ರ ಸರ್ಕಾರವನ್ನು ಕೋರಲಾಗಿದೆ. ಸದರಿ ವಿಷಯದ ಕುರಿತು ರಾಜ್ಯ ಸರ್ಕಾರವು ಎಲ್ಲಾ ಆಡಳಿತಾತ್ಮಕ ಹಾಗೂ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗಿದೆ.

(ಜಸಂಇ 35 ಡಬ್ಲೂಎಂ 2025)

(ಡಿ.ಕೆ. ಶಿವಕುಮಾರ್)
ಉಪ ಮುಖ್ಯಮಂತ್ರಿಗಳು